# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1500 |
| ಸದಸ್ಯರ ಹೆಸರು | : | ಡಾ: ಎಂ.ಜಿ.ಮುಳೆ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯ ಮಂತ್ರಿಯವರು |
| ಉತ್ತರಿಸುವ ದಿನಾಂಕ | : | 20.03.2025. |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯ ಸರ್ಕಾರಿ ನೌಕರರ ನೇಮಕಾತಿಗೆ ಗರಿಷ್ಠ ವಯೋಮಿತಿ ಸಾಮಾನ್ಯ ವರ್ಗದವರಿಗೆ 35 ಮತ್ತು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದವರಿಗೆ 38 ಇದ್ದು ಇದನ್ನು ಹೆಚ್ಚಿಸುವ ಆಲೋಚನೆ ಇದೆಯೇ ; | ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮ 6ರ ಉಪನಿಯಮ 1ಕ್ಕೆ ತಿದ್ದುಪಡಿ ಮಾಡಿ ದಿನಾಂಕ 18.12.2008ರ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 42 ಎಸ್ ಆರ್ ಆರ್ 2008ರಲ್ಲಿ ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡ ಅಥವಾ ಹಿಂದುಳಿದ ವರ್ಗಗಳ ಪ್ರವರ್ಗ-1ಕ್ಕೆ ಸೇರಿದ ವ್ಯಕ್ತಿಗಳಿಗೆ **40 ವರ್ಷಗಳು**, ಇತರ ಹಿಂದುಳಿದ ವರ್ಗಗಳ ಪ್ರವರ್ಗ-II(a) ಅಥವಾ II(b), III(a) ಅಥವಾ III(b) ಗೆ ಸೇರಿದ ವ್ಯಕ್ತಿಗಳಿಗೆ **38 ವರ್ಷಗಳು**, ಇತರೆ ವ್ಯಕ್ತಿಗಳಿಗೆ **35 ವರ್ಷಗಳ** ಗರಿಷ್ಠ ವಯೋಮಿತಿಯನ್ನು ನಿಗದಿ ಪಡಿಸಲಾಗಿದೆ.<br><br>ಪ್ರಸ್ತುತ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳ ನೇರ ನೇಮಕಾತಿಗೆ ನಿಗಧಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಹೆಚ್ಚಿಸುವ ಯಾವುದೇ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ. |
| (ಆ) | ರಾಜ್ಯ ಸರ್ಕಾರಿ ಇಲಾಖೆಗಳಲ್ಲಿ ಲಕ್ಷಾಂತರ ಹುದ್ದೆಗಳು ಖಾಲಿ ಇದ್ದು ಅನೇಕ ವರ್ಷಗಳಿಂದ ನೇಮಕಾತಿಗಳು ನಡೆಯದಿರುವುದರಿಂದ ವಯೋಮಿತಿಯನ್ನು 3 ವರ್ಷಗಳಿಗೆ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗುವುದೆ; | |
| (ಇ) | ಹಲವಾರು ವರ್ಷಗಳಿಂದ ನೇಮಕಾತಿಗಳು ನಡೆಯದೆ ಯುವಕ/ಯುವತಿಯರು ಅವಕಾಶ ವಂಚಿತರಾಗಿದ್ದು ಮೂರು ವರ್ಷಗಳ ವಯೋಮಿತಿಯನ್ನು ಹೆಚ್ಚಿಸಿ ಆದೇಶ ಹೊರಡಿಸಿ ನ್ಯಾಯ ದೊರಕಿಸಿ ಕೊಡಲಾಗುವುದೆ? | |

ಸಂಖ್ಯೆ: ಸಿಆಸುಇ 71 ಸೇನೆನಿ 2025

(ಸಿದ್ದರಾಮಯ್ಯ)
**ಮುಖ್ಯಮಂತ್ರಿ**